**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

# O.S. No. 391/2023

ಸಾಕ್ಷಿಯನ್ನು ದಿನಾಂಕಃ 13.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎಸ್.ಎಂ.ಪಿ. ವಕೀಲರಿಂದಃ

ಈ ದಾವೆಯಲ್ಲಿ ನಾನು ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ದಿನಾಂಕಃ 23.11.2020 ರಂದು ಪ್ರತಿವಾದಿ ಬರೆದುಕೊಟ್ಟ ಆನ್ ಡಿಮಾಂಡ್ ಪ್ರೋ ನೋಟ್ ಹಾಗು ಹಣ ಸಂದ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, ಅದರಲ್ಲಿರುವ ಪ್ರತಿವಾದಿಯ ಸಹಿಗಳನ್ನು ಕ್ರಮವಾಗಿ **ನಿ.ಪಿ.-1(ಎ) ಮತ್ತು ನಿ.ಪಿ.-1(ಬಿ)** ಎಂದು, ನಾನು ಪ್ರತಿವಾದಿಗೆ ವಕೀಲರ ಮೂಲಕ ಕಳುಹಿಸಿದ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, 01 ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-3** ಎಂದು ಮತ್ತು 01 ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-4** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ಪ್ರತಿವಾದಿ ಹಾಗು ಅವರ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲಿಗಾಗಿ ಸಮಯಾವಕಾಶ ನೀಡಿ ಮುಂದೂಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**